ಕಳೆದ ಎರಡು ವರ್ಷಗಳಿಂದ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ. ಈಗಾಗಲೇ 150 ತೆಂಗಿನ ಸಸಿಗಳು, 100 ಮಾವಿನ ಗಿಡಗಳು ಮತ್ತು ಇತರೆ ಗಿಡಗಳಾದ ಗೋಡಂಬಿ, ಹುಣಸೆ, ಇತ್ಯಾದಿಗಳನ್ನು ನೆಡಲಾಗಿದೆ. ಮುಂಬರುವ ಮಳೆಗಾಲದಲ್ಲಿ ಇಲ್ಲಿ ಒಂದು ಚಿಕ್ಕ ಹೂವಿನ ತೋಟವನ್ನು ನಿರ್ಮಿಸಲು ಕ್ರಮ ವಿರ್ಪಡಿಸಲಾಗಿದೆ.

ಬೈಲವಾಡವರ್ತಿ

ಇಲ್ಲಿ ಸುಮಾರು ಅರ್ಧ ಎಕರೆಯಷ್ಟು ಪ್ರದೇಶವು ದೇವಸ್ಥಾನದ ಅಧೀನದಲ್ಲಿದ್ದು, ಇದರಲ್ಲಿ ಪವಿತ್ರವನ ಮತ್ತು ಹೂದೋಟವನ್ನು ನಿರ್ಮಿಸಲು ಯೋಜಿಸಲಾಗಿದ್ದು, ಮುಂಬರುವ ಮಳೆಗಾಲದಲ್ಲಿ ಈ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಇಲಾಖಾ ತೋಟದ ಉತ್ಪನ್ನಗಳ ಹರಾಜು

116- ಶ್ರೀ ಹೆಚ್. ಎಮ್. ರೇವಣ್ಣ(ಮಾಗಡಿ): ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯ ಸರ್ಕಾರದಲ್ಲಿ ಇಲಾಖಾ ತೋಟದ ಉತ್ಪನ್ನಗಳನ್ನು ಹರಾಜು ಮೂಲಕ ಮಾರಾಟ ಮಾಡಿ ಮಧ್ಯವರ್ತಿಗಳು ಲಾಭಗಳಿಸುವಂತೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಇದನ್ನು ತಪ್ಪಿಸಿ ಸ್ಥಳೀಯ ಬೆಳೆಗಾರರಿಗೆ ಈ ಉತ್ಪನ್ನಗಳ ಪ್ರಯೋಜನ ಪಡೆಯುವಂತೆ ಹಾಗೂ ಸ್ಥಳದಲ್ಲೇ ಮಾರಾಟ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?*

ಇ) *ಹಾಗಿದ್ದಲ್ಲಿ ಇದನ್ನು ಎಂದಿನಿಂದ ಜಾರಿಗೆ ತರಲಾಗುವುದು.*

ಶ್ರೀ ಎಂ.ಎಸ್. ಆತ್ಮಾನಂದ (ತೋಟಗಾರಿಕೆ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ತೋಟಗಾರಿಕೆ ಇಲಾಖೆಯಲ್ಲಿ ಅಸಮರ್ಪಕ ವೈಜ್ಞಾನಿಕ ಬೇಸಾಯ ಪದ್ಧತಿ..

117 - ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ): ಮಾನ್ಯ ತೋಟಗಾರಿಕೆ ರಾಜ್ಯಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಇಲಾಖಾ ತೋಟಗಳಲ್ಲಿ ವೈಜ್ಞಾನಿಕ ಬೇಸಾಯ ಪದ್ಧತಿಗಳನ್ನು ಸಮರ್ಪಕವಾಗಿ ಅನುಸರಿಸುತ್ತಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ರೀತಿ ವೈಜ್ಞಾನಿಕ ಬೇಸಾಯ ಪದ್ಧತಿಗಳನ್ನು ಬಳಸಿ ರೈತರಿಗೆ ಮಾದರಿಯಾಗುವಂತೆ ತೋಟಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಯೋಜನೆ ವಿನಾದರೂ ಸರ್ಕಾರದ ಮುಂದಿದೆಯೇ?*

ಶ್ರೀ ಎಂ.ಎಸ್. ಆತ್ಮಾನಂದ (ತೋಟಗಾರಿಕೆ ರಾಜ್ಯ ಸಚಿವರು):

ಅ) ಇಲ್ಲ.

ಆ) ತೋಟಗಾರಿಕೆ ಇಲಾಖೆಯ ಎಲ್ಲಾ ಕ್ಷೇತ್ರಗಳಲ್ಲಿಯೂ ವೈಜ್ಞಾನಿಕ ಬೇಸಾಯ ಪದ್ಧತಿಯನ್ನು ಅನುಸರಿಸಿ ಬೇಸಾಯ ಮಾಡಲಾಗುತ್ತಿದೆ.